ತೆರವಾಗಿದೆ.

ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ವಿಷಯ : – ಚನ್ನಪಟ್ಟಣ ತಾಲ್ಲೂಕಿನ ಚಿಕ್ಕಲ್ಲೂರು ಗ್ರಾಮದಲ್ಲಿರುವ ಕೃತಕ ಗರ್ಭಧಾರಣಾ ಕೇಂದ್ರದ ಸ್ಥಳಾಂತರ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 317(602)

ಶ್ರೀ ಸಾದತ್ ಆಲಿಖಾನ್ (ಚನ್ನಪಟ್ಟಣ)

ಮಾನ್ಯ ಪಶುಸಂಗೋಪನಾ ಮತ್ತು ಪಶುವೈದ್ಯ ಸೇವಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚನ್ನಪಟ್ಟಣ ತಾಲ್ಲೂಕಿನ ಚಿಕ್ಕಲ್ಲೂರು ಗ್ರಾಮದಲ್ಲಿರುವ ಕೃತಕ ಗರ್ಭಧಾರಣಾ ಕೇಂದ್ರವನ್ನು ದಶವಾರ ಗ್ರಾಮಕ್ಕೆ ಸ್ಥಳಾಂತರಿಸುವಂತೆ ಮಾನ್ಯ ಪಶುಸಂಗೋಪನಾ ಮತ್ತು ಪಶುವೈದ್ಯ ಸೇವಾ ಸಚಿವರು ಆದೇಶಿಸಿದ್ದರೂ ಸಹ ಅದನ್ನು ಸ್ಥಳಾಂತರಿಸದಿರುವುದು ನಿಜವೇ;

ಆ) ಹಾಗಿದ್ದಲ್ಲಿ ಅದನ್ನು ಸ್ಥಳಾಂತರಿಸದಿರಲು ಕಾರಣಗಳೇನು;

ಇ) ಇದನ್ನು ಯಾವಾಗ ಸ್ಥಳಾಂತರಿಸಲಾಗುವುದು

ಶ್ರೀ ಕೆ.ಎನ್.ನಾಗೇಗೌಡ

(ಪಶುಸಂಗೋಪನಾ ಮತ್ತು ಪಶುವೈದ್ಯ ಸೇವಾ ರಾಜ್ಯ ಸಚಿವರು)

ಹೌದು.

ಹಾಲಿ ಕಾರ್ಯ ನಿರ್ವಹಿಸುತ್ತಿರುವ ಕೃತಕ ಗರ್ಭಧಾರಣಾ ಕೇಂದ್ರಗಳನ್ನು ಬೇರೆ ಸ್ಥಳಗಳಿಗೆ ಸ್ಥಳಾಂತರಿಸದೇ ಇರಲು ಸರ್ಕಾರ ನೀತಿಯನ್ನು ರೂಪಿಸಿದೆ.

ಉದ್ಭವಿಸುವುದಿಲ್ಲ.

ವಿಷಯ : – ಸರ್ಕಾರಿ ಪಾಲಿಟೆಕ್ನಿಕ್ ಚನ್ನಪಟ್ಟಣ ಇಲ್ಲಿ ಎಲೆಕ್ಟ್ರಾನಿಕ್ಸ್ ಮತ್ತು ಕಂಪ್ಯೂಟರ್ ಸೈನ್ಸ್ ಕೋರ್ಸು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 318(603)

ಮಾನ್ಯ ಉನ್ನತ ಶಿಕ್ಷಣ ಹಾಗೂ ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 1993-94ನೇ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್ ಚನ್ನಪಟ್ಟಣ ಇಲ್ಲಿ ಎಲೆಕ್ಟ್ರಾನಿಕ್ಸ್ ಮತ್ತು ಕಂಪ್ಯೂಟರ್ ಸೈನ್ಸ್ ಕೋರ್ಸು ಪ್ರಾರಂಭಿಸಲು ಪ್ರಸ್ತಾವನೆ ಸರ್ಕಾರದ ಮಟ್ಟದಲ್ಲಿ ಬಾಕಿ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ದಿಸೆಯಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಇ) ಯಾವಾಗ ಸದರಿ ಕೋರ್ಸುಗಳನ್ನು ಪ್ರಾರಂಭಿಸಲಾಗುವುದು?

ಶ್ರೀ ಎಸ್.ಎಂ. ಯಾಹ್ಯಾ

(ಉನ್ನತ ಶಿಕ್ಷಣ ಹಾಗೂ ವಕ್ಫ್ ಸಚಿವರು)

ಇಲ್ಲ

ಉದ್ಭವಿಸುವುದಿಲ್ಲ

ಉದ್ಭವಿಸುವುದಿಲ್ಲ.